ಕವಶಿಸಸ/ಮಾಹಿತಿ/ಸಿಆರ್-169/2017-18 ದಿನಾಂಕ:17.1.2018

**ಪ್ರಕಟಣೆ**

**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು**

**ಮಾಹಿತಿ ಹಕ್ಕು ಅಧಿನಿಯಮ ಸೆಕ್ಷನ್ 4(1) (ಎ) ರಡಿ ಸಾರ್ವಜನಿಕರಿಗೆ ಮಾಹಿತಿ:**

ಮಾಹಿತಿ ಹಕ್ಕು ಅಧಿನಿಯಮ 2005 ರ ಅಡಿಯಲ್ಲಿ ಸಾರ್ವಜನಿಕರು ಕೋರಿದಂತಹ ಮಾಹಿತಿಯನ್ನು ಅಧಿನಿಯಮದ ಪರಿಮಿತಿಯೊಳಗೆ ಪೂರೈಸುವುದು ಕಡ್ಡಾಯವಾಗಿರುತ್ತದೆ ಸದರಿ ಅಧಿನಿಯಮದ ಸೆಕ್ಷನ್ 4(1) (ಎ) ಅಡಿಯಲ್ಲಿ ಸರ್ಕಾರದ ಎಲ್ಲಾ ಇಲಾಖೆಗಳು ತಮ್ಮ ಇಲಾಖೆಯ ವತಿಯಿಂದ ಸಾರ್ವಜನಿಕರಿಗೆ ಒದಗಿದಬೇಕಾದಂತಹ ಸ್ವರೂಪ, ಇಲಾಖೆಯಿಂದ ಅನಿಷ್ಠಾನಗೊಳಿಸುವ ಕಾರ್ಯಕ್ರಮಗಳು, ಇತ್ಯಾದಿ ಮಾಹಿತಿಯನ್ನು ಸಾರ್ವಜನಿಕ ಮಾಹಿತಿಗಾಗಿ ಪ್ರಕಟಿಸಲು ಅಗತ್ಯವಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗ, ಹಿಂದುಳಿದ ವರ್ಗಗಳ ವಸತಿ ಶಾಲೆ/ಅಟಲ್ ಬಿಹಾರಿ ವಾಜಪೇಯಿ/ ಇಂದಿರಾಗಾಂಧಿ/ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳು ಒಟ್ಟು 818 ವಸತಿ ಶಾಲಾ/ಕಾಲೇಜು ಕಾರ್ಯನಿರ್ವಹಸುತ್ತಿವೆ.

ರಾಜ್ಯ ಮಟ್ಟದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಕೇಂದ್ರ ಕಛೇರಿಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು ಸಂಘದ ಮುಖ್ಯಸ್ಥರಾಗಿದ್ದು, ಸಂಘದ ಅಧಿಕಾರಿಗಳು/ ಸಿಬ್ಬಂದಿಗಳು ಸಂಘದ ಆಡಳಿತ ಮಂಡಳಿ ತೀರ್ಮಾನದಂತೆ ಹಾಗೂ ಸರ್ಕಾರಿ ನಿಯಮದಂತೆ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸಲಾಗುತ್ತಿದೆ.

ರಾಜ್ಯದಲ್ಲಿ ವಿವಿಧ ವರ್ಗಗಳ ಗ್ರಾಮೀಣ ಪ್ರದೇಶದ ಬಡ ಮಕ್ಕಳ ಶೈಕ್ಷಣಿಕ ಅಭಿವೃದ್ದಿಗಾಗಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಎಲ್ಲಾ ವರ್ಗಗಳ ವಸತಿ ಶಾಲೆಗಳನ್ನು ಒಂದೇ ಸಂಸ್ಥೆಯ ಕಾರ್ಯವ್ಯಾಪ್ತಿಗೆ ಒಳಪಡಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ '**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ**'ವನ್ನು 1999-2000ನೇ ಸಾಲಿನಲ್ಲಿ ಸ್ಥಾಪನೆ ಮಾಡಲಾಗಿದೆ. ಸಂಘದ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ/ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಒಟ್ಟು 818 ವಸತಿ ಶಾಲೆಗಳು/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಪ್ರವರ್ಗವಾರು ವಿವರ ಸಂಘದ ವೆಬ್ ಸೈಟ್ ರಲ್ಲಿ www.kreis.kar.nic.in ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ.ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅನೇಕ ಮಾಹಿತಿಯನ್ನು ಸಾರ್ವಜನಿಕರು ತಿಳಿದುಕೊಳ್ಳಬಹುದಾದ ಮಾಹಿತಿಯನ್ನು ಈ ಪ್ರಕಟಣೆಯಿಂದ ಪಡೆದುಕೊಳ್ಳಲು ಅನುಕೂಲವಾಗುವುದೆಂದು ಭಾವಿಸುತ್ತೇವೆ.

ಕಾರ್ಯನಿರ್ವಾಹಕ ನಿರ್ದೇಶಕರು